# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 960
**ಮಾನ್ಯ ಸದಸ್ಯರ ಹೆಸರು** : ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ)
**ಉತ್ತರಿಸಬೇಕಾದ ದಿನಾಂಕ** : 22-02-2024
**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಐತಿಹಾಸಿಕ ಸ್ಥಳಗಳೆಷ್ಟು; ಐತಿಹಾಸಿಕ ಸ್ಥಳಗಳ ನಿರ್ವಹಣೆಗಾಗಿ ವಾರ್ಷಿಕ ಸರ್ಕಾರ ನಿಗಧಿಪಡಿಸಿರುವ ಅನುದಾನವೆಷ್ಟು; | ಕರ್ನಾಟಕ ರಾಜ್ಯದಲ್ಲಿ ಒಟ್ಟು 844 ಸ್ಮಾರಕಗಳು ಸಂರಕ್ಷಿತ ಪಟ್ಟಿಯಲ್ಲಿದೆ. 2023-24ನೇ ಆರ್ಥಿಕ ಸಾಲಿನಲ್ಲಿ ಸ್ಮಾರಕಗಳ ನಿರ್ವಹಣೆಗಾಗಿ ರೂ.101.76 ಲಕ್ಷಗಳ ಅನುದಾನವನ್ನು ನಿಗಧಿಪಡಿಸಲಾಗಿದೆ. |
| ಆ) | ರಾಜ್ಯದಲ್ಲಿನ ಬಹಳಷ್ಟು ಐತಿಹಾಸಿಕ ಸ್ಥಳಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು: | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 341ರಲ್ಲಿ ಘೋಷಿಸಿರುವಂತೆ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿ.ಎಸ್.ಆರ್.) ಕಾರ್ಯಕ್ರಮಗಳ ಅಡಿಯಲ್ಲಿ ರಾಜ್ಯದ ಸ್ಮಾರಕಗಳ ಸಂರಕ್ಷಣೆ ಮತ್ತು ಮೂಲಭೂತ ಮತ್ತು ಉನ್ನತ ಸೌಕರ್ಯಗಳನ್ನು ಒದಗಿಸಿ ಸ್ಮಾರಕಗಳನ್ನು ಖಾಸಗಿ ಸಹಭಾಗಿತ್ವದಡಿ ಅಭಿವೃದ್ಧಿಪಡಿಸಲು "ಸ್ಮಾರಕ ದತ್ತು" ಯೋಜನೆಯನ್ನು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಟಿಓಆರ್/31/ಟಿಡಿಎ/2022, ದಿನಾಂಕ:08/04/2022ರಲ್ಲಿ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಸರ್ಕಾರದ ಆದೇಶ ಸಂಖ್ಯೆ ಟಿಓಆರ್ 31 ಟಿಡಿಎ 2022, ದಿನಾಂಕ :18.08.2022ರಲ್ಲಿ ಈ ಯೋಜನೆಯ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.<br><br>ಅಲ್ಲದೇ, ರಾಜ್ಯದಲ್ಲಿನ ಐತಿಹಾಸಿಕ ಸ್ಥಳಗಳಲ್ಲಿನ ಮೂಲಭೂತ ಸೌಲಭ್ಯಗಳ ಕೊರತೆಯ ಬಗ್ಗೆ ಇಲಾಖೆಗೆ ಸ್ವೀಕೃತವಾಗುವ ಪ್ರಸ್ತಾವನೆಗಳನ್ನು ಆಯವ್ಯಯದಲ್ಲಿ ಇಲಾಖೆಗೆ ಒದಗಿಸುವ ಅನುದಾನದ ಲಭ್ಯತೆಯನ್ನು ಪರಿಶೀಲಿಸಿ, ಆದ್ಯತೆಯಾನುಸಾರ ಪ್ರವಾಸಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುತ್ತದೆ. |
| ಇ) | ರಾಜ್ಯದಲ್ಲಿನ ಐತಿಹಾಸಿಕ ಸ್ಥಳಗಳ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ನೀಡಲಾಗಿದೆಯೇ? ಹಾಗಿದ್ದಲ್ಲಿ, ಎಷ್ಟು ಐತಿಹಾಸಿಕ ಸ್ಥಳಗಳನ್ನು ಖಾಸಗಿ ಸಂಸ್ಥೆಗಳಿಗೆ ನೀಡಲಾಗಿದೆ? | ಹೌದು.<br><br>ಈ ಯೋಜನೆಯಡಿ ಒಟ್ಟಾರೆ 272 ಸ್ಮಾರಕಗಳನ್ನು ಆಯ್ಕೆಗೊಳಿಸಿ, ಆಸಕ್ತಿ ಅಭಿವ್ಯಕ್ತಿ (Expression of Interest) ಟೆಂಡರ್ ಅನ್ನು ಆಹ್ವಾನಿಸಲಾಗಿದೆ. ಪ್ರಸ್ತುತ, ಈ ಕೆಳಕಂಡ ಎರಡು ಸ್ಮಾರಕಗಳ ಸಂರಕ್ಷಣೆ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಖಾಸಗಿ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ.<br><br>1) ವಿಜಯಪುರ ಜಿಲ್ಲೆ, ವಿಜಯಪುರ ನಗರದಲ್ಲಿರುವ ತಾಜ್ ಬಾವಡಿ ಸ್ಮಾರಕದ ಸಂರಕ್ಷಣೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಕಾಮಗಾರಿಗಾಗಿ World Monument Fund India, Mumbai ಇವರೊಂದಿಗೆ ಒಡಂಬಡಿಕೆ.<br><br>2) ಕೊಪ್ಪಳ ಜಿಲ್ಲೆ, ಆನೆಗುಂದಿ ತಾಲ್ಲೂಕು ಆನೆಗುಂದಿಯ ಗಗನ್ ಮಹಲ್ ಸ್ಮಾರಕದ ನಿರ್ವಹಣೆಗಾಗಿ ಡೆಕ್ಕನ್ ಹೆರಿಟೇಜ್ ಫೌಂಡೇಶನ್ ಇಂಡಿಯಾ ಬೆಂಗಳೂರು, ಸಂಸ್ಥೆಯೊಂದಿಗೆ ಒಡಂಬಡಿಕೆ. |

TOR 95 TDV 2024

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು